**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,**

**ಸಿದ್ದಾಪುರ**

**ಸಿ.ಸಿ ನಂ. 334/2024**

ಪಿರ್ಯಾದಿಃ ಸೆಂಟ್ ಮಿಲ್ಲಾಗ್ರೀಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಲಿಮಿಟೆಡ್, ಕಾರವಾರ, ಸಿದ್ದಾಪುರ ಬ್ರಾಂಚ್, ಸಿದ್ದಾಪುರ ಇದರ ಪರವಾಗಿ ಶ್ರೀ ಉಲ್ಲಾಸ ಪಿ ಶೇಟ್, 37 ವರ್ಷ, ಹಲಗೇರಿ, ಸಿದ್ದಾಪುರ

-ವಿರುದ್ಧ-

ಆರೋಪಿಃ ಶಿವಾನಂದ ರವೀಂದ್ರ ಹಳೆಕೋಟೆ, ಪ್ರಾಯಸ್ಥ, ಉದ್ಯೋಗಃ ವ್ಯಾಪಾರ, ವಾಸಃ ರಾಜಮಾರ್ಗ, ಸಿದ್ದಾಪುರ,

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆ ಕಲಂ 351 ರಡಿ ಆರೋಪಿಯ ಹೇಳಿಕೆ**

**ಪ್ರಶ್ನೆಃ1** ನ್ಯಾಯಾಲಯದ ಮುಂದೆ ಅಭಿಯೋಜನೆಯ ಪರವಾಗಿ ನಡೆದ ವಿಚಾರಣೆಯಲ್ಲಿ ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀಯಾ?

**ಉತ್ತರಃ**

**ಪ್ರಶ್ನೆಃ** 2. **ಫ್ರಾಸಾ-1 ಶ್ರೀ ಉಲ್ಲಾಸ ಪಿ ಶೇಟ್, ಸೀನಿಯರ್ ಆಸಿಸ್ಟೆಂಟ್** ತಮ್ಮ ಸಾಕ್ಷ್ಯದಲ್ಲಿ ಹೇಳಿದ್ದೇನೆಂದರೆ, ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಫಿರ್ಯಾದುದಾರರು ಸೆಂಟ್ ಮಿಲ್ಲಾಗ್ರೀಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಲಿಮಿಟೆಡ್ ಸಂಸ್ಥೆಯು ಕರ್ನಾಟಕ ಸೌಹಾರ್ದಾ ಕೋ-ಆಪರೇಟಿವ್ ಕಾಯ್ದೆ ರಡಿಯಲ್ಲಿ ನೊಂದಾಯಿತ ಸಂಸ್ಥೆಯಾಗಿದ್ದು ಹಣಕಾಸು ವ್ಯವಹಾರ, ಅಗತ್ಯವಿರುವವರಿಗೆ ಹಣವನ್ನು ಸಾಲವಾಗಿ ನೀಡುವ ಸೌಹಾರ್ದ ಸಹಕಾರಿ ಸಂಸ್ಥೆಯಾಗಿದ್ದು, ಆರೋಪಿತನಾದ ನೀನು ಫಿರ್ಯಾದುದಾರರ ಸಹಕಾರಿ ಸಂಸ್ಥೆಯಲ್ಲಿ ಸಾಲಕ್ಕಾಗಿ ಮನವಿ ಮಾಡಿದ್ದು, ನಂತರ ದಿನಾಂಕ 23.10.2020 ರಂದು ರೂ. 5,00,000/- ಗಳನ್ನು ಸಾಲ ಪಡೆದಿರುತ್ತೀಯಾ ಎಂದು ಸಾಕ್ಷವನ್ನು ನುಡಿದಿರುತ್ತಾರೆ, ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆ: 3 ಫ್ರಾಸಾ:1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ಸದರಿ ಸಾಲಕ್ಕಾಗಿ ನೀನು ಎಲ್ಲಾ ದಾಖಲಾತಿ ಮತ್ತು ಆಗ್ರಿಮೆಂಟ್ ಮಾಡಿದ್ದು ಹಾಗೂ ಶ್ರೀ ಮಂಜುನಾಥ ಬೆಳ್ಳಿಯವರ್ ನಾಯ್ಕ, ಮಂಜುನಾಥ ಪೂಜಾರಿ ಮತ್ತು ಶ್ರೀಮತಿ ರಾಧ ಹಳಿಕೋಟೆ ರವರನ್ನು ಶ್ಯೂರಟೀಯಾಗಿಸಿದ್ದು, ಆರೋಪಿತನಾದ ನೀನು ಮತ್ತು ಶ್ಯೂರಿಟೀಗಳು ಸಾಲದ ಕಂತುಗಳನ್ನು ಸರಿಯಾಗಿ ಪಾವತಿ ಮಾಡದೆ ಇದ್ದು, ಸದರಿ ಸಾಲದ ಈಗಿನ ಬಾಕಿ ಮೊತ್ತವು ರೂ. 3,74,234/- ಆಗಿದ್ದು ಹಾಗೂ ಫಿರ್ಯಾದುದಾರರ ಸಂಸ್ಥೆಯು ಹಲವು ಬಾರಿ ಸಾಲದ ಮರುಪಾವತಿಗಾಗಿ ಬೇಡಿಕೆ ಇಟ್ಟಿದ್ದು, ಸದರಿ ಸಾಲದ ಬಾಬ್ತಿಗಾಗಿ ದಿನಾಂಕ 12.09.2024 ರಂದು ಕೆನರಾ ಬ್ಯಾಂಕ್, ಸಿದ್ದಾಪುರ ಶಾಖೆಯ ಚೆಕ್ಕಿನ ಸಂಖ್ಯೆ 690767 ನ ರೂ. 3,74,234/- ನ ಚೆಕನ್ನು ನೀಡಿರುವುದಾಗಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರ:-**

**ಪ್ರಶ್ನೆ: 4. ಫ್ರಾಸಾ:1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ತದನಂತರ ಸಹಕಾರಿ ಸಂಸ್ಥೆಯು ಸದರಿ ಚೆಕನ್ನು ನಗದು ಗೊಳಿಸಲು ಕೆನರಾ ಬ್ಯಾಂಕ್, ಸಿದ್ದಾಪುರ ಶಾಖೆಗೆ ಹಾಕಿದಾಗ ನಿನ್ನ ಖಾತೆಯಲ್ಲಿ ಸಾಕಷ್ಟು ಹಣ ಇರದ ಕಾರಣ ದಿ: 14.09.2024 ರಂದು "**Funds Insufficient**" ಎಂಬ ಹಿಂಬರಹದೊಂದಿಗೆ ವಾಪಸ್ ಬಂದಿರುವುದಾಗಿ ಮತ್ತು ಸದರಿ ವಿಷಯವನ್ನು ದಿ: 24.09.2024 ರಂದು ಅವರ ವಕೀಲರ ಮೂಲಕ ನೋಟಿಸ್ಸು ನೀಡಿ ತಿಳಿಸಿರುವುದಾಗಿ, ಸದರಿ ನೋಟಿಸ್ಸುನ್ನು ಆರೋಪಿತನಾದ ನೀನು ದಿನಾಂಕ 25.09.2024 ರಂದು ಪಡೆದುಕೊಂಡಿದ್ದರೂ ನೀನು ಹಣವನ್ನು ಮರುಪಾವತಿ ಮಾಡದೇ **ನೆಗೊಷಬಲ್ ಇನ್ಸ್ಟುಮೆಂಟ್ ಆಕ್ಟ ರ 138** ಅಡಿಯಲ್ಲಿ ಅಫರಾದ ಎಸುಗಿರುವಿರೆಂದು ನಿನ್ನ ಮೇಲೆ ಆರೋಪಣೆ ಇದೆ ಮತ್ತು ಸದ್ರಿ ಆರೋಪಣೆಯನ್ನು ಈ ನ್ಯಾಯಾಲಯದ ಅಧಿಕಾರ ವ್ಯಾಪ್ತಿಯಲ್ಲಿ ಮಾಡಿರುತ್ತೀಯಾ ಎಂದು ಆರೋಪಿಸಲಾಗಿದೆ. ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರ:-**

**ಪ್ರಶ್ನೆ: 5. ಫ್ರಾಸಾ:1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ಪ್ರಕರಣದ ಕೆಳಗಿನ ದಾಖಲಾತಿಗಳನ್ನು ಫಿರ್ಯಾದುದಾರರು ಗುರುತಿಸಿ ಸಾಕ್ಷ್ಯವನ್ನು ನುಡಿದಿರುತ್ತಾರೆ, ತಾನು ತನ್ನ ಮುಖ್ಯವಿಚಾರಣೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ

ಸಹಿ ತನ್ನದೇ ಆಗಿರುತ್ತದೆ ಎಂದು, ದಿಃ 13-05-2022 ಅಧಿಕಾರ ಪತ್ರವನ್ನು ನಿಪಿ-1 ಎಂದು, ಸಾಕ್ಷಿಯು ದಿಃ 14-10-2008 ರ ನೊಂದಣಿ ಪ್ರಮಾಣ ಪತ್ರವನ್ನು ನಿಪಿ-2 ಎಂದು , ಸಾಕ್ಷಿಯು ದಿಃ 12-09-2024 ರ ಚೆಕ್ ಸಂಖ್ಯೆ 690767 ಕೆನರಾ ಬ್ಯಾಂಕ್, ಶಾಖೆ ಸಿದ್ದಾಪುರ ಶಾಖೆಯ, ಚೆಕನ್ನು ನಿ.ಪಿ-3 ಎಂದು, ನಿ.ಪಿ-3ರಲ್ಲಿರುವ ಆರೋಪಿತನ ಸಹಿಯನ್ನು ನಿ.ಪಿ-3(ಎ) ಎಂದು, ಬ್ಯಾಂಕ್ ರಿರ್ಟನ್ ಮೆಮೊ ದಿನಾಂಕ 14-09-2024 ನ್ನು ನಿಪಿ-4 ಎಂದು, ಸಾಕ್ಷಿಯ ಆರೋಪಿಗೆ ನ್ಯಾಯವಾದಿಗಳ ಮೂಲಕ ನೀಡಿದ ದಿಃ 24-09-2024 ನೋಟೀಸ್ ನ ಕಚೇರಿ ಪ್ರತಿಯನ್ನು ನಿಪಿ-5 ಎಂದು , ಸಾಕ್ಷಿಯು ಅಂಚೆ ರಶೀದಿಯನ್ನು ನಿಪಿ-6 ಎಂದು, ಸಾಕ್ಷಿಯು ಅಂಚೆ ಸ್ವೀಕೃತಿ ರಶೀದಿಯನ್ನು ನಿಪಿ-7 ಎಂದು ಗುರುತಿಸಿ ಸಾಕ್ಷ್ಯವನ್ನು ನುಡಿದಿರುತ್ತಾರೆ, ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆಃ 6** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-3 ಚೆಕ್ಕಿನ ನಂ 690767 ನಿಮ್ಮ ಕೆನರಾ ಬ್ಯಾಂಕ್ ಖಾತಾ ನಂ.110003470045 ಖಾತೆಗೆ ಸಂಬಂಧಿಸಿದ ಚೆಕ್ ಆಗಿರುತ್ತದೆ ಎಂಬುದನ್ನು ಒಪ್ಪಿಕೊಳ್ಳುವಿರಾ?

**ಉತ್ತರಃ**

**ಪ್ರಶ್ನೆಃ 7** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-3 ಚೆಕ್ಕಿನ ನಂ 690767 ಮೇಲಿನ ಸಹಿ ನಿಮ್ಮದೇ ಎಂದು ಒಪ್ಪಿಕೊಳ್ಳುವಿರಾ?

**ಉತ್ತರಃ**

**ಪ್ರಶ್ನೆಃ 8** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-3 ಚೆಕ್ಕಿನ ನಂ 690767 ನ್ನು ಪಿರ್ಯಾದಿ ಸೊಸೈಟಿಗೆ ನೀಡಿರುವುದಾಗಿ ನೀವು ಒಪ್ಪಿಕೊಳ್ಳುವಿರಾ?

**ಉತ್ತರಃ**

**ಪ್ರಶ್ನೆಃ 9** ಪಿರ್ಯಾದಿ ಸೊಸೈಟಿಯಿಂದ ದಿನಾಂಕ 23.10.2020 ರಂದು ರೂ. 5,00,000/- ಸಾಲವನ್ನು ಪಡೆದಿರುವಿರಾ?

**ಉತ್ತರಃ**

**ಪ್ರಶ್ನೆ: 10** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-3 ಚೆಕ್ಕಿನ ನಂ 690767 ದಿನಾಂಕ 12.09.2024 ರಲ್ಲಿ ನಮೂದಿಸಿದ ರೂ. 3,74,234/- ನ್ನು (ಮೂರು ಲಕ್ಷದ ಎಪ್ಪತ್ತನಾಲ್ಕು ಸಾವಿರದ ಎರಡು ನೂರ ಮೂವತ್ತನಾಲ್ಕು ರೂಪಾಯಿ ಮಾತ್ರ) ಪಿರ್ಯಾದಿ ಸೊಸೈಟಿಗೆ ಪಾವತಿ ಮಾಡುವ ಭಾಧ್ಯತೆಯನ್ನು ನೀವು ಒಪ್ಪಿಕೊಳ್ಳುವಿರಾ?

**ಉತ್ತರಃ**

ಪ್ರಶ್ನೆ: **11** ಈ ಹಂತದಲ್ಲಿ ಈ ಪ್ರಕರಣವನ್ನು ರಾಜೀ ಮಾಡಿಕೊಳ್ಳಲು ಇಚ್ಚಿಸುವಿರಾ?

**ಉತ್ತರಃ**

ಪ್ರಶ್ನೆ: 12. ಈ ಪ್ರಕರಣದಲ್ಲಿ ನಿನಗೆ ಇನ್ನು ಏನಾದರೂ ಹೇಳುವುದು ಇದೆಯೇ ?

**ಉತ್ತರಃ**

ಪ್ರಶ್ನೆ: 13. ನಿನ್ನ ಪರವಾಗಿ ಏನಾದರೂ ಸಾಕ್ಷಿ ಅಥವಾ ದಾಖಲೆಗಳನ್ನು ಹಾಜರುಪಡಿಸುವಿರಾ?

**ಉತ್ತರಃ**

ಫಿರ್ಯಾದುದಾರರ ಪರ ಸಾಕ್ಷಿದಾರರ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ದಿನಾಂಕಃ **11-11-2025** ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ.,ಸಿದ್ದಾಪುರ.**